ಹಿಂದುಳಿದ ವರ್ಗಗಳ ವಿದ್ಯಾರ್ಥಿನಿಯರ ಹಾಸ್ಟೆಲ್ ಪ್ರಾರಂಭಿಸುವುದು

660 (707) ಶ್ರೀ ಪಾಟೀಲ್ ಎಂ ವೈ (ಅಫ್ಜಲ್‌ಪುರ) – ಸಮಾಜ ಕಲ್ಯಾಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ ?

(ಅ) ಅಫ್‌ಜಲ್‌ಪುರ ನಗರವು ತಾಲ್ಲೂಕು ಕೇಂದ್ರವಾಗಿದ್ದು, ಹಿಂದುಳಿದ ವರ್ಗಗಳ ಇಲಾಖೆಯ ಮೆಟ್ರಿಕ್–ಪೂರ್ವ ವಿದ್ಯಾರ್ಥಿನಿಯರ ಹಾಸ್ಟೆಲ್‌ಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ,

(ಆ) ಹಾಗಿದ್ದಲ್ಲಿ ಇದೇ ಶೈಕ್ಷಣಿಕ ವರ್ಷದಲ್ಲಿ ವಸತಿ ನಿಲಯವನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದೇ ?

ಶ್ರೀ ಬಾಲಚಂದ್ರ ಲ ಜಾರಕಿಹೊಳಿ (ಸಮಾಜ ಕಲ್ಯಾಣ ಸಚಿವರು) –

(ಅ) ಹೌದು

(ಆ) ಇಲ್ಲ, 2007–2008ನೇ ಸಾಲಿಗೆ ಹೊಸ ವಿದ್ಯಾರ್ಥಿನಿಲಯಗಳನ್ನು ಈಗಾಗಲೇ ಮಂಜೂರು ಮಾಡಲಾಗಿರುವುದರಿಂದ, ಮತ್ತೆ ಈ ವರ್ಷ ಅಫ್‌ಜಲ್‌ಪುರ ಟೌನ್‌ಗೆ ಮೆಟ್ರಿಕ್–ಪೂರ್ವ ಬಾಲಕಿಯರ ನಿಲಯ ಮಂಜೂರು ಮಾಡಲು ಬರುವುದಿಲ್ಲ ಮುಂದಿನ ವರ್ಷಗಳಲ್ಲಿ ---------- ಕ್ರಮ ಕೈಗೊಳ್ಳಲಾಗುವುದು

ಮೊರಾರ್ಜಿದೇಸಾಯಿ ವಸತಿ ಶಾಲೆ ಕಟ್ಟಡ ಪೂರ್ತಿಗೊಳಿಸುವುದು

661 (709) ಶ್ರೀ ಪಾಟೀಲ್ ಎಂ ವೈ (ಅಫ್ಜಲ್‌ಪುರ) – ಕಾರ್ಮಿಕ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ ?

(ಅ) ಗುಲಬರ್ಗಾ ತಾಲ್ಲೂಕಿನ ಸೈಯದ್ ಚಿಂಚೋಳಿಯಲ್ಲಿ ಅಲ್ಪಸಂಖ್ಯಾತರ ಇಲಾಖೆಯಿಂದ ಮೊರಾರ್ಜಿ ದೇಸಾಯಿ ವಸತಿ ಶಾಲೆ ಪ್ರಾರಂಭಗೊಂಡಿದ್ದು ನಿಜವೇ ,

(ಅ) ಈ ವಸತಿ ನಿಲಯಕ್ಕೆ ಕಟ್ಟಡ ಮಂಜೂರಾಗಿ ಹಲವು ವರ್ಷಗಳಿಂದ ಕಟ್ಟಡ ಕಾಮಗಾರಿ ಅರ್ಧಕ್ಕೆ ನಿಂತಿರಲು ಕಾರಣವೇನು ,

(ಇ) ಹಾಗಿದ್ದಲ್ಲಿ, ಈ ಕಟ್ಟಡವನ್ನು ಪೂರ್ತಿಗೊಳಿಸಲು ಕ್ರಮ ಕೈಗೂಳ್ಳಲಾಗುವುದೇ ?

ಶ್ರೀ ಇಕ್ಬಾಲ್ ಅನ್ಸಾರಿ – (ಕಾರ್ಮಿಕ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು) –

(ಅ) ಇಲ್ಲ